ಶ್ರೀ ಬಿ.ಬಿ. ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಚಿವರು) :—

ಅ) ಪ್ರಾಥಮಿಕ, ಪಶುಚಿಕಿತ್ಸಾ ಕೇಂದ್ರ .. 2018
ಪಶು ಚಿಕಿತ್ಸಾಲಯ .. 853
ಪಶು ಆಸ್ಪತ್ರೆ .. 294
ಒಟ್ಟು ಪಶುವೈದ್ಯ ಸಂಸ್ಥೆಗಳು .. 3165

ಆ) 653

ಕೆಲವುಗಳಲ್ಲಿ 290 ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪಶು ಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. ಇದಲ್ಲದೇ ಪ್ರತಿ ಸಾಲಿನಲ್ಲಿ ಹಂತ ಹಂತವಾಗಿ ಮೇಲ್ದರ್ಜೆಗೇರಿಸಲಾಗುತ್ತದೆ.

ಇ) ಹೌದು

ಈ) ಸರ್ಕಾರದ ಪರಿಶೀಲನೆಯಲ್ಲಿದೆ.

ರಾಜ್ಯದ ಕ್ರೀಡಾ ಪಟುಗಳಿಗೆ ನಿವೇಶನ.

1611(2256) ಶ್ರೀ ಡಿ.ವಿ. ಸದಾನಂದ ಗೌಡ (ಪುತ್ತೂರು) :— ಮಾನ್ಯ ಕನ್ನಡ ಮತ್ತು ಸಂಸ್ಕೃತಿ, ಯುವಜನ ಸೇವಾ ಹಾಗೂ ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದ ಕ್ರೀಡಾಪಟುಗಳ ಪೈಕಿ ರಾಷ್ಟ್ರ ಹಾಗೂ ಅಂತರ ರಾಷ್ಟ್ರೀಯ ಮಟ್ಟದ ಎಷ್ಟು ಕ್ರೀಡಾಪಟುಗಳಿಗೆ ಬೆಂಗಳೂರಿನಲ್ಲಿ ನಿವೇಶನಗಳನ್ನು ಒದಗಿಸಲಾಗಿದೆ?

ಆ) ರಾಷ್ಟ್ರೀಯ ಹಾಗೂ ಅಂತರ ರಾಷ್ಟ್ರೀಯ ಕ್ರೀಡಾಪಟುಗಳಿಗೆ ಒದಗಿಸಿದ ಸೌಕರ್ಯಗಳು ಯಾವುವು?

ಇ) 1998-99ನೇ ಸಾಲಿನಲ್ಲಿ ಕ್ರೀಡಾಪಟುಗಳಿಗೆ ಖರ್ಚು ಮಾಡಿದ ಹಣದ ಒಟ್ಟು ಮೊತ್ತವೆಷ್ಟು?

ಶ್ರೀಮತಿ ಲೀಲಾದೇವಿ ಆರ್. ಪ್ರಸಾದ್ (ಕನ್ನಡ ಮತ್ತು ಸಂಸ್ಕೃತಿ, ಯುವಜನ ಸೇವಾ ಹಾಗೂ ಕ್ರೀಡಾ ಸಚಿವರು) :—

ಅ) ರಾಷ್ಟ್ರ ಹಾಗೂ ಅಂತರ ರಾಷ್ಟ್ರ ಮಟ್ಟದ 104 ಕ್ರೀಡಾಪಟುಗಳಿಗೆ ಬೆಂಗಳೂರಿನಲ್ಲಿ ನಿವೇಶನಗಳನ್ನು ಆದ್ಯತೆ ಮೇರೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಒದಗಿಸಲಾಗಿದೆ.

ಅ) ಈ ಕೆಳಕಂಡ ಸೌಲಭ್ಯಗಳನ್ನು ಕ್ರೀಡಾಪಟುಗಳಿಗೆ ಇಲಾಖೆಯಿಂದ ಕೊಡಲಾಗುತ್ತಿದೆ.

1. ಆದ್ಯತೆಯ ಮೇರೆಗೆ ಬೆಂಗಳೂರಿನಲ್ಲಿ ಕ್ರೀಡಾ ಪಟುಗಳಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿವೇಶನಗಳನ್ನು ಒದಗಿಸಲಾಗುತ್ತಿದೆ.
2. ರಾಷ್ಟ್ರ ಹಾಗೂ ಅಂತರರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿದ ಕ್ರೀಡಾಪಟುಗಳಿಗೆ ಪ್ರಯಾಣ ಭತ್ಯ ಹಾಗೂ ದಿನಭತ್ಯೆಯನ್ನು ಕೊಡಲಾಗುತ್ತಿದೆ.
3. ಅತ್ಯುತ್ತಮ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿಯನ್ನು ಹಾಗೂ ಅದರೊಂದಿಗೆ ರೂ. 20.00 ಲಕ್ಷ ನಗದು ಬಹುಮಾನವನ್ನು ಕೊಡಲಾಗುತ್ತಿದೆ.
4. 4ನೇ ರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಪದಕ ಗಳಿಸಿದ ಕ್ರೀಡಾಪಟುಗಳಿಗೆ ನಗದು ಪ್ರಶಸ್ತಿ ಕೊಡಲಾಗುತ್ತಿದೆ.
5. ವೃತ್ತಿಪರ ಶಿಕ್ಷಣ ಸಂಸ್ಥೆಗಳಲ್ಲಿ ಕ್ರೀಡಾಪಟುಗಳಿಗೆ ಕ್ರೀಡಾ ಮೀಸಲಾತಿಯಡಿಯಲ್ಲಿ ಸೀಟುಗಳನ್ನು ಕಾಯ್ದಿರಿಸಲಾಗುತ್ತಿದೆ.
6. ಆರ್ಥಿಕವಾಗಿ ಕಷ್ಟ ಪರಿಸ್ಥಿತಿಯಲ್ಲಿರುವಂತಹ ರಾಜ್ಯ, ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ಹಾಗೂ ಕುಸ್ತಿಪಟುಗಳಿಗೆ ಮಾಸಾಶನವನ್ನು ಕೊಡಲಾಗುತ್ತಿದೆ.
7. ರಾಜ್ಯ ಮಟ್ಟದ ಕ್ರೀಡಾ ಸಂಸ್ಥೆಗಳಿಗೆ ರಾಷ್ಟ್ರ ಹಾಗೂ ಅಂತರ ರಾಷ್ಟ್ರ ಮಟ್ಟದ ಕ್ರೀಡಾಕೂಟಗಳನ್ನು ಸಂಘಟಿಸಲು ಉಚಿತವಾಗಿ ಕ್ರೀಡಾಂಗಣಗಳನ್ನು ಹಾಗೂ ಎಲ್ಲಾ ರೀತಿಯ ಕ್ರೀಡಾ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.
8. ನುರಿತ ಕ್ರೀಡಾ ತರಬೇತುದಾರರಿಂದ ರಾಷ್ಟ್ರ ಹಾಗೂ ಅಂತರರಾಷ್ಟ್ರ ಮಟ್ಟದ ಕ್ರೀಡಾಪಟುಗಳಿಗೆ ಕ್ರೀಡಾ ತರಬೇತಿಯನ್ನು ಕೊಡಲಾಗುತ್ತಿದೆ.
9. ಬೆಂಗಳೂರು ನಗರವಲ್ಲದೆ ರಾಜ್ಯದ ಇತರ ನಗರಗಳಲ್ಲೂ ಸಹ ಕ್ರೀಡಾ ಪಟುಗಳಿಗೆ ನಿವೇಶನಗಳನ್ನು ಆದ್ಯತೆಯ ಮೇರೆಗೆ ಕೊಡಲಾಗುತ್ತಿದೆ.

ಆ) 1998-99ನೇ ಸಾಲಿನಲ್ಲಿ ಕ್ರೀಡೆಗಾಗಿ ಜಿಲ್ಲಾ ಪರಿಷತ್ ವಲಯದಡಿಯಲ್ಲಿ ಒಟ್ಟು ರೂ. 205.60 ಲಕ್ಷ ಹಣವನ್ನು ವಿನಿಯೋಗಿಸಲಾಗಿದೇ ಹಾಗೂ ರಾಜ್ಯ ವಲಯ ಯೋಜನೆ ಅಡಿಯಲ್ಲಿ ರೂ. 454.37 ಲಕ್ಷ ಹಣವನ್ನು ವಿನಿಯೋಗಿಸಲಾಗಿದೆ.

ಅರಣ್ಯ ಭಾಗಗಳ ಒತ್ತುವರಿ.

1612(2259) ಶ್ರೀ ಡಿ.ಬಿ. ಸದಾನಂದಗೌಡ (ಪುತ್ತೂರು) :— ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.